# All India Radio: Bangalore
# National Bulletin In Kannada
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

## 31.03.2026  19.35 hrs

***************

**ಮುಖ್ಯಾಂಶಗಳು**

1. **ಗುಜರಾತ್‌ನ ವಾವ್-ಥರಾದ್‌ನಲ್ಲಿ 19 ಸಾವಿರದ 806 ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**
2. **ಹಣಕಾಸು ಕಾಯ್ದೆ-2026ಕ್ಕೆ ಕೇಂದ್ರ ಸರ್ಕಾರದಿಂದ ಅಧಿಸೂಚನೆ; ನಾಳೆಯಿಂದ ಜಾರಿ**
3. **ಬಿಇಎಲ್‌ನೊಂದಿಗೆ 1 ಸಾವಿರದ 950 ಕೋಟಿ ರೂಪಾಯಿಗಳ ಬೃಹತ್ ಒಪ್ಪಂದಕ್ಕೆ ರಕ್ಷಣಾ ಸಚಿವಾಲಯ ಸಹಿ**
4. **ಏಷ್ಯನ್ ಸ್ಕ್ವಾಷ್ ಒಕ್ಕೂಟದಿಂದ 2025ನೇ ಸಾಲಿನ ಪ್ರತಿಷ್ಠಿತ ಪ್ರಶಸ್ತಿಗಳು ಪ್ರಕಟ; ಅಭಯ್ ಸಿಂಗ್ ಮತ್ತು ಅನಾಹತ್ ಸಿಂಗ್‌ಗೆ ವರ್ಷದ ಆಟಗಾರ ಪ್ರಶಸ್ತಿ**

***************

ಗುಜರಾತ್ ಭೇಟಿಯಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರಿಂದು ವಾವ್-ಥರಾದ್‌ನಲ್ಲಿ 19 ಸಾವಿರದ 806 ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದರು.
ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಯೋಗದೊಂದಿಗೆ ಹಮ್ಮಿಕೊಳ್ಳಲಾಗಿರುವ ಈ ಯೋಜನೆಗಳು ಇಂಧನ, ಸಾರಿಗೆ, ರೈಲ್ವೆ ಮತ್ತು ನಗರಾಭಿವೃದ್ಧಿ ಸೇರಿದಂತೆ ವಿವಿಧ ವಲಯಗಳನ್ನು ಒಳಗೊಂಡಿವೆ.
ಇದರ ಜೊತೆಗೆ ಪ್ರಧಾನಮಂತ್ರಿ ಆವಾಸ್ ಯೋಜನೆ ಗ್ರಾಮೀಣ ಅಡಿಯಲ್ಲಿ ಗುಜರಾತ್‌ನ 34 ಜಿಲ್ಲೆಗಳ ಫಲಾನುಭವಿಗಳಿಗಾಗಿ ನಿರ್ಮಿಸಲಾದ 38 ಸಾವಿರದ 949 ಮನೆಗಳ ಗೃಹಪ್ರವೇಶ ಸಮಾರಂಭವನ್ನು ಪ್ರಧಾನಿ ವರ್ಚುವಲ್ ಮೂಲಕ ನೆರವೇರಿಸಿದರು.
ಇದಕ್ಕೂ ಮುನ್ನ ಅವರು, ಗುಜರಾತ್‌ನ ಸಾನಂದ್‌ನಲ್ಲಿರುವ ಕೇನ್ಸ್ ಸೆಮಿಕಂಡಕ್ಟರ್‌ನ ಒಎಸ್‌ಎಟಿ ಸ್ಥಾವರವನ್ನು ಉದ್ಘಾಟಿಸಿದರು.
ಬಳಿಕ ಮಾತನಾಡಿದ ಅವರು, ಈ ಘಟಕದ ಮೂಲಕ ನಡೆಯಲಿರುವ ಉತ್ಪಾದನೆಯು ಸೆಮಿಕಂಡಕ್ಟರ್ ಕ್ಷೇತ್ರದಲ್ಲಿನ ಒಂದು ಪ್ರಮುಖ ಸಾಧನೆಯಾಗಿದೆ ಎಂದು ಹೇಳಿದರು. ಸಾನಂದ್‌ನ ಈ ಘಟಕದಲ್ಲಿ ತಯಾರಾಗುವ ಚಿಪ್‌ಗಳು ಅಮೆರಿಕವನ್ನು ತಲುಪಲಿವೆ. ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತವು ಪ್ರಮುಖ ಪಾಲುದಾರ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ ಎಂದರು.

***************

2026-27ನೇ ಸಾಲಿನ ಕೇಂದ್ರ ಆಯವ್ಯಯದ ಹಣಕಾಸು ಪ್ರಸ್ತಾವನೆಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ 'ಹಣಕಾಸು ಕಾಯ್ದೆ 2026' ಅನ್ನು ಅಧಿಕೃತವಾಗಿ ಅಧಿಸೂಚಿಸಿದೆ. ಈ ಕಾಯ್ದೆಗೆ ನಿನ್ನೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದು, ನಾಳೆಯಿಂದ ಆರಂಭವಾಗುವ ಹೊಸ ಹಣಕಾಸು ವರ್ಷದಿಂದ ಇದು ಜಾರಿಗೆ ಬರಲಿದೆ ಎಂದು ಕೇಂದ್ರ ಕಾನೂನು ಮತ್ತು ನ್ಯಾಯ ಸಚಿವಾಲಯ ತಿಳಿಸಿದೆ.

ಕಳೆದ ಶುಕ್ರವಾರವಷ್ಟೇ ಸಂಸತ್ತು ಈ ವಿಧೇಯಕಕ್ಕೆ ಅನುಮೋದನೆ ನೀಡಿತ್ತು. ಲೋಕಸಭೆಯು ಮಾರ್ಚ್ 25ರಂದು 32 ತಿದ್ದುಪಡಿಗಳೊಂದಿಗೆ ಇದನ್ನು ಅಂಗೀಕರಿಸಿದ್ದರೆ, ರಾಜ್ಯಸಭೆಯು ಸುದೀರ್ಘ ಚರ್ಚೆಯ ನಂತರ ಧ್ವನಿಮತದ ಮೂಲಕ ವಿಧೇಯಕವನ್ನು ಲೋಕಸಭೆಗೆ ಮರಳಿಸಿ ಶಾಸನಬದ್ಧ ಪ್ರಕ್ರಿಯೆಯನ್ನು ಪೂರ್ಣಗೊಳಿಸಿತ್ತು.

2026-27ನೇ ಸಾಲಿನ ಬಜೆಟ್‌ನಲ್ಲಿ ಒಟ್ಟು 53.47 ಲಕ್ಷ ಕೋಟಿ ರೂಪಾಯಿಗಳ ವೆಚ್ಚವನ್ನು ಅಂದಾಜಿಸಲಾಗಿದ್ದು, ಇದು ಪ್ರಸಕ್ತ ಹಣಕಾಸು ವರ್ಷಕ್ಕಿಂತ ಶೇಕಡಾ 7.7 ರಷ್ಟು ಹೆಚ್ಚಳವಾಗಿದೆ. ಆರ್ಥಿಕ ಬೆಳವಣಿಗೆ ಮತ್ತು ಉದ್ಯೋಗ ಸೃಷ್ಟಿಗೆ ಪೂರಕವಾಗಿ ಬೃಹತ್ ಮೂಲಸೌಕರ್ಯ ಯೋಜನೆಗಳಿಗಾಗಿ 12.2 ಲಕ್ಷ ಕೋಟಿ ರೂಪಾಯಿಗಳ ಬಂಡವಾಳ ವೆಚ್ಚವನ್ನು ಮೀಸಲಿಡಲಾಗಿದೆ. ಬೃಹತ್ ಯೋಜನೆಗಳ ಅಭಿವೃದ್ಧಿಯನ್ನು ಚುರುಕುಗೊಳಿಸಲು 'ಮೂಲಸೌಕರ್ಯ ಅಪಾಯ ಅಭಿವೃದ್ಧಿ ನಿಧಿ'ಯನ್ನು ಸ್ಥಾಪಿಸುವುದಾಗಿ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

***************

ನಳಂದ ವಿಶ್ವವಿದ್ಯಾಲಯದ 2ನೇ ಘಟಿಕೋತ್ಸವದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿಯಾದರು. ಇದೇ ವೇಳೆ ವಿಶ್ವವಿದ್ಯಾಲಯ ಕ್ಯಾಂಪಸ್‌ನಲ್ಲಿ ಆಗ್ನೇಯ ಏಷ್ಯಾ ಅಧ್ಯಯನ ಕೇಂದ್ರ ಮತ್ತು ವಿಶ್ವ ಮಿತ್ರಾಲಯ ಸಭಾಂಗಣವನ್ನು ಅವರು ಉದ್ಘಾಟಿಸಿದರು. ಈ ವೇಳೆ, ವಿಶ್ವದ 31 ದೇಶಗಳ ವಿದ್ಯಾರ್ಥಿಗಳಿಗೆ ಪದವಿ ಹಾಗೂ ಪದಕಗಳನ್ನು ವಿತರಿಸಲಾಯಿತು.

ನಾಳೆ ರಾಷ್ಟ್ರಪತಿ ಕರ್ನಾಟಕದ ತುಮಕೂರಿನ ಶ್ರೀ ಸಿದ್ಧಗಂಗಾ ಮಠದಲ್ಲಿ ಶ್ರೀ ಶಿವಕುಮಾರ ಸ್ವಾಮಿ ಅವರ 119ನೇ ಜನ್ಮ ದಿನಾಚರಣೆ ಮತ್ತು ಗುರುವಂದನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಈ ಹಿನ್ನೆಲೆ ಇಂದು ರಾತ್ರಿ ಅವರು ಬೆಂಗಳೂರಿಗೆ ಆಗಮಿಸಲಿದ್ದಾರೆ.

***************

ಭಾರತೀಯ ವಾಯುಪಡೆಗಾಗಿ ಎರಡು ಮೌಂಟೆನ್ ರಾಡಾರ್‌ಗಳನ್ನು ಖರೀದಿಸಲು ರಕ್ಷಣಾ ಸಚಿವಾಲಯ ನವದೆಹಲಿಯಲ್ಲಿ ಇಂದು ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್–ಬಿಇಎಲ್‌ನೊಂದಿಗೆ 1 ಸಾವಿರದ 950 ಕೋಟಿ ರೂಪಾಯಿಗಳ ಬೃಹತ್ ಒಪ್ಪಂದಗಳಿಗೆ ಸಹಿ ಹಾಕಿದೆ.

ಭಾರತ್ ಸ್ವದೇಶಿ ವಿನ್ಯಾಸ ಅಭಿವೃದ್ಧಿ ಮತ್ತು ತಯಾರಿಕೆ ಖರೀದಿ ವರ್ಗದಡಿಯಲ್ಲಿ ಈ ಒಪ್ಪಂದ ಮಾಡಿಕೊಳ್ಳಲಾಗಿದ್ದು, ಸರ್ಕಾರದ ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾ ಉಪಕ್ರಮಗಳಿಗೆ ಪೂರಕವಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಅತ್ಯಾಧುನಿಕ ರಾಡಾರ್‌ಗಳನ್ನು ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ–ಡಿಆರ್‌ಡಿಒ ಅಡಿಯಲ್ಲಿ ಬರುವ ವಿದ್ಯುನ್ಮಾನ ಮತ್ತು ರಾಡಾರ್ ಅಭಿವೃದ್ಧಿ ಸಂಸ್ಥೆ–ಎಲ್‌ಆರ್‌ಡಿಇ ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಿದ್ದು, ಬಿಇಎಲ್ ಸಂಸ್ಥೆ ಇವುಗಳನ್ನು ತಯಾರಿಸಲಿದೆ.

***************

ಕೇಂದ್ರ ಸರ್ಕಾರ ಆಡಳಿತಾತ್ಮಕ ಮಟ್ಟದಲ್ಲಿ ಮಹತ್ವದ ಬದಲಾವಣೆ ಮಾಡಿದ್ದು, ಹಿರಿಯ ಅಧಿಕಾರಿ ವೀರ್ ವಿಕ್ರಮ್ ಯಾದವ್ ಅವರನ್ನು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ–ಡಿಜಿಸಿಎದ ನೂತನ ಮಹಾನಿರ್ದೇಶಕರನ್ನಾಗಿ ನೇಮಕ ಮಾಡಿದೆ.

ಪ್ರಸ್ತುತ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಲ್ಲಿ ಹೆಚ್ಚುವರಿ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸುತ್ತಿರುವ ವೀರ್ ವಿಕ್ರಮ್ ಯಾದವ್ ಅವರು, ಫೈಜ್ ಅಹಮ್ಮದ್ ಕಿದ್ವಾಯಿ ಅವರ ಸ್ಥಾನವನ್ನು ತುಂಬಲಿದ್ದಾರೆ.

ನಿರ್ಗಮಿತ ಮಹಾನಿರ್ದೇಶಕ ಫೈಜ್ ಕಿದ್ವಾಯಿ ಅವರನ್ನು ಸಿಬ್ಬಂದಿ ಮತ್ತು ತರಬೇತಿ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿಯಾಗಿ ವರ್ಗಾಯಿಸಲಾಗಿದೆ.

***************

ದೇಶಾದ್ಯಂತ ಪಿಎನ್‌ಜಿ ವಿಸ್ತರಣೆಯನ್ನು ಮುಂದುವರೆಸಲು ಕೇಂದ್ರ ಸರ್ಕಾರ ರಾಷ್ಟ್ರೀಯ ಪಿಎನ್‌ಜಿ ಅಭಿಯಾನ 2.0 ಅನ್ನು ಜೂನ್ 30ರವರೆಗೆ ವಿಸ್ತರಿಸಿದೆ.

ನಗರ ಅನಿಲ ವಿತರಣಾ ಘಟಕಗಳಿಗೆ ದೇಶೀಯ ಪಿಎನ್‌ಜಿ ಸಂಪರ್ಕಗಳನ್ನು ವೇಗಗೊಳಿಸಲು ನಿರ್ದೇಶನ ನೀಡಲಾಗಿದೆ.

ಮಾರ್ಚ್ ತಿಂಗಳಲ್ಲಿ ದೇಶೀಯ, ವಾಣಿಜ್ಯ, ಹಾಸ್ಟೆಲ್, ಮೆಸ್ ಮತ್ತು ಕ್ಯಾಂಟೀನ್‌ಗಳು ಸೇರಿದಂತೆ 3.1 ಲಕ್ಷಕ್ಕೂ ಹೆಚ್ಚು ಸಂಪರ್ಕಗಳನ್ನು ಅನಿಲೀಕರಣಗೊಳಿಸಲಾಗಿದೆ ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

ಇದಲ್ಲದೇ, ಮಾರ್ಚ್ ಮೊದಲಿನಿಂದ ಪ್ರತಿ ದಿನ ಸರಾಸರಿ 50 ಲಕ್ಷಕ್ಕೂ ಹೆಚ್ಚು ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳನ್ನು ವಿತರಿಸಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

ದೇಶದಲ್ಲಿ ಸಾಕಷ್ಟು ಪೆಟ್ರೋಲ್, ಡೀಸೆಲ್, ಎಲ್‌ಪಿಜಿ, ಪಿಎನ್‌ಜಿ ಸಂಗ್ರಹವಿದೆ ಎಂದು ಸರ್ಕಾರ ಪುನರುಚ್ಚರಿಸಿದೆ.

ಫೆಬ್ರವರಿ 28 ರಿಂದೀಚೆಗೆ 5.72 ಲಕ್ಷಕ್ಕೂ ಹೆಚ್ಚು ಪ್ರಯಾಣಿಕರು ಸ್ವದೇಶಕ್ಕೆ ಮರಳಿದ್ದಾರೆ. ಸಹಾಯವಾಣಿಗಳು ದಿನದ 24 ಗಂಟೆಗಳೂ ಕಾರ್ಯನಿರ್ವಹಿಸುತ್ತಿವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

***************

ಪಶ್ಚಿಮ ಏಷ್ಯಾ ಸಂಘರ್ಷಕ್ಕೆ ಸಂಬಂಧಿಸಿದ ಅಮೆರಿಕಾದ ಮಿಲಿಟರಿ ವಿಮಾನವೊಂದು ಸಿಸಿಲಿಯ ಸಿಗೋನೆಲ್ಲಾ ವಾಯುನೆಲೆಯನ್ನು ಬಳಸಲು ಇಟಲಿ ಸರ್ಕಾರ ಅನುಮತಿಯನ್ನು ನಿರಾಕರಿಸಿದೆ. ಈ ಕಾರ್ಯಾಚರಣೆಗೆ ಅಧಿಕೃತ ಪೂರ್ವಾನುಮತಿ ಪಡೆದಿಲ್ಲ ಮತ್ತು ಇದು ಅಸ್ತಿತ್ವದಲ್ಲಿರುವ ಸಾಮಾನ್ಯ ಸೌಹಾರ್ದ ಒಪ್ಪಂದಗಳ ವ್ಯಾಪ್ತಿಗೆ ಬರುವುದಿಲ್ಲ ಎಂದು ಇಟಲಿ ರಕ್ಷಣಾ ಸಚಿವ ಗೈಡೊ ಕ್ರೊಸೆಟ್ಟೊ ಸ್ಪಷ್ಟಪಡಿಸಿದ್ದಾರೆ.

ಇಟಲಿಯ ಸಾರ್ವಭೌಮತ್ವ ಮತ್ತು ಕಾನೂನು ಪ್ರಕ್ರಿಯೆಗಳನ್ನು ಗೌರವಿಸುವುದು ಅತ್ಯಗತ್ಯ ಎಂದು ಇಟಲಿ ಪ್ರಧಾನಿ ಜಾರ್ಜಿಯಾ ಮೆಲೊನಿ ಪ್ರತಿಪಾದಿಸಿದ್ದಾರೆ.

ಇದಕ್ಕೂ ಮುನ್ನ ಸ್ಪೇನ್ ಕೂಡ ಇರಾನ್ ಯುದ್ಧಕ್ಕೆ ಸಂಬಂಧಿಸಿದ ಅಮೆರಿಕಾದ ವಿಮಾನಗಳಿಗೆ ತನ್ನ ವಾಯುಪ್ರದೇಶ ಮತ್ತು ಮಿಲಿಟರಿ ನೆಲೆಗಳ ಬಳಕೆಯನ್ನು ನಿರ್ಬಂಧಿಸಿತ್ತು.

***************

ಬಿಹಾರದ ನಳಂದ ಜಿಲ್ಲೆಯಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಜೀವ ಹಾನಿ ಕುರಿತು ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

ತಮ್ಮ ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ರಾಷ್ಟ್ರಪತಿ ಮೃತಪಟ್ಟವರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕೂಡ ಘಟನೆಯನ್ನು ತೀವ್ರ ದುಃಖಕರ ಎಂದು ಬಣ್ಣಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

***************

ಭಾರತೀಯ ಜನತಾ ಪಕ್ಷ ಗುವಾಹಟಿಯಲ್ಲಿ ಇಂದು 2026 ರ ಅಸ್ಸಾಂ ವಿಧಾನಸಭಾ ಚುನಾವಣೆಗೆ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದೆ.

ಪ್ರಣಾಳಿಕೆಯನ್ನು ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಕೇಂದ್ರ ಸಚಿವ ಸರ್ಬಾನಂದ ಸೋನೋವಾಲ್ ಮತ್ತು ಮುಖ್ಯಮಂತ್ರಿ ಹಿಮಂತ ಬಿಸ್ವ ಶರ್ಮಾ ಅವರ ಸಮ್ಮುಖದಲ್ಲಿ ಬಿಡುಗಡೆ ಮಾಡಿದರು.

ಪ್ರಣಾಳಿಕೆಯು 'ಸುರಕ್ಷಿತ ಅಸೋಮ್, ವಿಕಸಿತ ಅಸೋಮ್' ಎಂಬ ಧ್ಯೇಯದೊಂದಿಗೆ 31 ಆಶ್ವಾಸನೆಗಳನ್ನು ಪಟ್ಟಿ ಮಾಡಿದೆ. ಸರ್ಕಾರಿ ಭೂಮಿಯಿಂದ ಅಕ್ರಮ ಅತಿಕ್ರಮಣವನ್ನು ತೆರವುಗೊಳಿಸಲು ಮತ್ತು ಎಲ್ಲಾ ನೈಜ ನಾಗರಿಕರಿಗೆ ಭೂ ಹಕ್ಕುಗಳನ್ನು ನೀಡುವ ಕ್ರಮಗಳನ್ನು ಇದು ಒಳಗೊಂಡಿದೆ.

***************

ಅಂಚೆ ನೌಕರರ ನಿಯೋಗ ಮತ್ತು ವಿವಿಧ ಅಂಚೆ ಒಕ್ಕೂಟಗಳ ಪ್ರತಿನಿಧಿಗಳು ಇಂದು ನವದೆಹಲಿಯಲ್ಲಿ ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆ ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಅವರನ್ನು ಭೇಟಿ ಮಾಡಿದರು.

ಕೆಲವು ವಿಭಾಗಗಳಲ್ಲಿ ಕೇಡರ್ ಪುನರ್ರಚನೆ, ಹಣಕಾಸು ಮೇಲ್ದರ್ಜೆ ಯೋಜನೆಗಳ ಅನುಷ್ಠಾನ ಮತ್ತು ಪಿಂಚಣಿ ಸಂಬಂಧಿತ ವಿಷಯಗಳು ಸೇರಿದಂತೆ ಅಂಚೆ ಇಲಾಖೆಗೆ ಸಂಬಂಧಿಸಿದ ಹಲವಾರು ವಿಷಯಗಳ ಕುರಿತು ಅವರು ಚರ್ಚಿಸಿದರು.

***************

ಮಂಗೋಲಿಯಾದಲ್ಲಿ ತೀವ್ರಗೊಂಡಿರುವ ರಾಜಕೀಯ ಅಸ್ಥಿರತೆ ಮತ್ತು ಆರ್ಥಿಕ ಒತ್ತಡಗಳ ನಡುವೆ ಉಖ್ರಾಲ್ ನ್ಯಾಮ್-ಓಸರ್ ಅವರು ದೇಶದ ನೂತನ ಪ್ರಧಾನಮಂತ್ರಿಯಾಗಿ ಆಯ್ಕೆಯಾಗಿದ್ದಾರೆ.

ಕಳೆದ ಒಂಬತ್ತು ತಿಂಗಳ ಅವಧಿಯಲ್ಲಿ ಮಂಗೋಲಿಯಾ ಕಾಣುತ್ತಿರುವ ಮೂರನೇ ನಾಯಕ ಇವರಾಗಿದ್ದು, ವಾರಗಳ ಕಾಲ ನಡೆದ ರಾಜಕೀಯ ಬಿಕ್ಕಟ್ಟಿನ ನಂತರ ಸಂಸತ್ತು ಉಖ್ರಾಲ್ ಅವರನ್ನು ಬಹುಮತದೊಂದಿಗೆ ಆಯ್ಕೆ ಮಾಡಿದೆ. ಭ್ರಷ್ಟಾಚಾರದ ಆರೋಪಗಳ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿ ಜಂದನ್‌ಶತರ್ ಗೊಂಬೊಜಾವ್ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು.

***************

ಏಷ್ಯನ್ ಸ್ಕ್ವಾಷ್ ಒಕ್ಕೂಟ-ಎಎಸ್‌ಎಫ್ 2025ನೇ ಸಾಲಿನ ಪ್ರತಿಷ್ಠಿತ ಪ್ರಶಸ್ತಿಗಳನ್ನು ಪ್ರಕಟಿಸಿದ್ದು, ಭಾರತದ ಅಭಯ್ ಸಿಂಗ್ ವರ್ಷದ ಪುರುಷ ಆಟಗಾರ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದರೆ, ಉದಯೋನ್ಮುಖ ಪ್ರತಿಭೆ ಅನಾಹತ್ ಸಿಂಗ್ ಬಾಲಕಿಯರ ಕಿರಿಯ ವಿಭಾಗದಲ್ಲಿ ಅತ್ಯುನ್ನತ ಗೌರವಕ್ಕೆ ಭಾಜನರಾಗಿದ್ದಾರೆ.

ಇದರ ಜೊತೆಗೆ ಈಜಿಪ್ಟ್‌ನಲ್ಲಿ ನಡೆದ 2025ರ ವಿಶ್ವ ಜೂನಿಯರ್ ತಂಡ ಚಾಂಪಿಯನ್‌ಶಿಪ್‌ನಲ್ಲಿ ಕಂಚಿನ ಪದಕ ಗೆದ್ದಿದ್ದ ಭಾರತದ ಪುರುಷರ ತಂಡಕ್ಕೆ ವರ್ಷದ ತಂಡ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

***************

ಚಂಡೀಗಢದ ಮಹಾರಾಜ ಯದವಿಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಐಪಿಎಲ್ ಟಿ-20 ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಮತ್ತು ಗುಜರಾತ್ ಟೈಟಾನ್ಸ್ ತಂಡಗಳು ಮುಖಾಮುಖಿಯಾಗಲಿವೆ.

ಟಾಸ್ ಗೆದ್ದ ಪಂಜಾಬ್ ಕಿಂಗ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

*******ಮುಕ್ತಾಯ*******